ರಾಜ್ಯದಲ್ಲಿ ಬಿ.ಡಿ.ಓ ಹಾಗೂ ಇ.ಓ. ಹುದ್ದೆಗಳ ಭರ್ತಿ ಮಾಡುವುದು.

1546 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಖಾಲಿ ಇರುವ ಕ್ಷೇತ್ರಾಭಿವೃದ್ಧಿ ಅಧಿಕಾರಿಗಳ, ತಾಲ್ಲೂಕು ಪಂಚಾಯತ್ ಸಮಿತಿಯ ಕಾರ್ಯನಿರ್ವವಾಹಕ ಅಧಿಕಾರಿಗಳ ಹುದ್ದೆ ಎಷ್ಟು?*

ಆ) *ಈ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಕ್ಷೇತ್ರಾಭಿವೃದ್ಧಿ ಅಧಿಕಾರಿ ಹುದ್ದೆಗಳು 57

ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳು 05

ಆ) ಸಿ ಆ್ಯಂಡ್ ಆರ್ ನಿಯಮಾವಳಿಗಳಗನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಹಿರೇಕೆರೂರು ತಾಲ್ಲೂಕು ಚಿಕ್ಕೇರೂರ ಗ್ರಾಮ ಪಂಚಾಯಿತಿ ಅಭವೃದ್ಧಿ ಕಾಮಗಾರಿಗಳು.

1547- ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹಿರೇಕೆರೂರು ತಾಲ್ಲೂಕು ಚಿಕ್ಕೇರೂರ ಗ್ರಾಮ ಪಂಚಾಯತ್‌ನಲ್ಲಿ 1996-97, 1997-98ನೇ ಸಾಲಿನಲ್ಲಿ ಶೇ. 10ರ ಅನುದಾನದಲ್ಲಿ ಯಾವ ಯಾವ ಕೆಲಸಗಳನ್ನು ಕೈಗೆತ್ತಿಕೊಳ್ಳಲಾಗಿದೆ, ಈ ಕೆಲಸಗಳನ್ನು ಪೂರ್ಣಗೊಳಿಸಲಾಗಿದೆಯೇ?*

ಆ) *ಹಾಗಿಲ್ಲದಿದ್ದಲ್ಲಿ ಈ ಬಗ್ಗೆ ಯಾವ ಕ್ರಮ ತೆಗೆದುಕೊಳ್ಳಲಾಗುವುದು?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) 1996-97ನೇ ಸಾಲಿನಲ್ಲಿ ಕೈಗೆತ್ತಿಕೊಂಡ ಕಾಮಗಾರಿಗಳು.

1) ಚಿಕ್ಕೇರೂರು ಗ್ರಾಮದಲ್ಲಿ ಅಂಗನವಾಡಿ ಕಟ್ಟಡ ದುರಸ್ತಿ ಮತ್ತು ಪರಸಿ ಕಲ್ಲು ಹಾಕುವುದು.

2) ಚಿಕ್ಕೇರೂರು ಗ್ರಾಮದಲ್ಲಿ ಗ್ರಾಮ ಪಂಚಾಯತಿ ಕಟ್ಟಡ ದುರಸ್ತಿ

3) ಜ್ಯಾವಳ್ಳಿ ಗ್ರಾಮದ ಸಮಾಜ ಮಂದಿರದ ಕಟ್ಟಡ ಕೆಲಸ.